ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಮೈಸೂರು ನಗರದಲ್ಲಿ ಕುಡಿಯುವ ನೀರು ಸರಬರಾಜು

ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ);-

1007(1004) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೈಸೂರು ನಗರದ ಜನಸಂಖ್ಯೆಗೆ ಅಗತ್ಯವಾಗಿ ಬೇಕಾಗಿರುವ ಕುಡಿಯುವ ನೀರಿನ ಪ್ರಮಾಣ ಎಷ್ಟು ; ಈಗ ಯಾವ ಯಾವ ಮೂಲಗಳಿಂದ ಎಷ್ಟೆಷ್ಟು ಪ್ರಮಾಣದಲ್ಲಿ ನೀರನ್ನು ಸರಬರಾಜು ಮಾಡಲಾಗುತ್ತಿದೆ ; ಕೊರತೆ ಇರುವ ಕುಡಿಯುವ ನೀರಿನ ಪ್ರಮಾಣವನ್ನು ಸರಿದೂಗಿಸಲು ಕೈಗೊಂಡಿರುವ ಕ್ರಮಗಳೇನು ;

(ಆ) ಹೊಂಗಳ್ಳಿ ಪಂಪಿಂಗ್ ಸ್ಟೇಷನ್‌ನಿಂದ ಹೆಚ್ಚುವರಿಯಾಗಿ ಎಷ್ಟು ನೀರನ್ನು ಸರಬರಾಜು ಮಾಡಲು ಕ್ರಮ ಜರುಗಿಸಲಾಗಿದೆ ; ಯಾವಾಗ ಈ ನೀರನ್ನು ಸರಬರಾಜು ಮಾಡಲು ಆರಂಭಿಸಲಾಗುವುದು ;

(ಇ) ಮಹಾನಗರ ಪಾಲಿಕೆಯಲ್ಲಿನ ಬೋರ್‌ವೆಲ್‌ಗಳ ಸಂಖ್ಯೆ ಎಷ್ಟು; ಈ ಬೋರ್‌ವೆಲ್‌ಗಳಿಗೆ ಮಳೆ ನೀರಿನ ಮೂಲಕ ಜಲಮೂಲವನ್ನು ಮರುಪೂರಣ ಮಾಡಲು ಕ್ರಮ ತೆಗೆದುಕೊಳ್ಳಲಾಗಿದೆಯೇ ; (ವಿವರ ಒದಗಿಸುವುದು)

(ಈ) ಮೈಸೂರು ನಗರಕ್ಕೆ ನಾಲ್ವಡಿ ಕೃಷ್ಣರಾಜ ಒಡೆಯರ್ ಸ್ಮರಣಾರ್ಥವಾಗಿ ವಾಣಿವಿಲಾಸ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಎಂದು ಪ್ರತ್ಯೇಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯನ್ನು ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?